ದೂರವಾಣಿ ಸಂಖ್ಯೆ : 2419677/2419361
ಫ್ಯಾಕ್ಸ್: 0821-2419363/2419301

e-mail registrar@uni-mysore.ac.in
www.uni-mysore.ac.in

ಮೈಸೂರು ವಿಶ್ವವಿದ್ಯಾನಿಲಯ
ಸ್ಥಾಪನೆ : 1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-570005
ದಿನಾಂಕ: 02.07.2026.

ಎಸಿ2(ಎಸ್)/18/2022-23

## ಸುತ್ತೋಲೆ

**ವಿಷಯ:** ಮೈಸೂರು ತಾಲ್ಲೂಕಿನ ಎಲ್ಲಾ ಮೆಟ್ರಿಕ್ ನಂತರದ ವಿದ್ಯಾಸಂಸ್ಥೆಗಳಲ್ಲಿ 2026-27ನೇ ಶೈಕ್ಷಣಿಕ ಸಾಲಿನಲ್ಲಿ ಪೋಷಕರ ವಾರ್ಷಿಕ ವರಮಾನ 2.50 ಲಕ್ಷದೊಳಗಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಪ್ರವೇಶಾತಿ ಸಂದರ್ಭದಲ್ಲಿ ಪ್ರವೇಶ ಶುಲ್ಕ ಪಾವತಿಸುವಂತೆ ಒತ್ತಾಯಿಸದಿರುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಸ.ಕ.ಇ.,ಬೆಂಗಳೂರುರವರ ಪತ್ರ ಸಂಖ್ಯೆ: ಸಕಇ/168 ಪಕವಿ 2020 ದಿನಾಂಕ 12.11.2020.
2. ಸರ್ಕಾರದ ಉಪಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಧಾನ ಸೌಧ, ಬೆಂಗಳೂರು ಇವರ ಆದೇಶ ಸಂಖ್ಯೆ: SWD/EDU/ED3/91/2023, (Com: 1098854) ಬೆಂಗಳೂರು, ದಿನಾಂಕ 03.07.2023.
3. ಮಾನ್ಯ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರುರವರ ಪತ್ರ ಸಂಖ್ಯೆ: SWD/EDU/ED3/116/939230/2022, ದಿನಾಂಕ 21.08.2024.
4. ಈ ಕಛೇರಿ ಪತ್ರ ದಿನಾಂಕ 28.08.2024, ಇ-ಮೇಲ್ ದಿನಾಂಕ 30.08.2024.
5. ಸಹಾಯಕ ನಿರ್ದೇಶಕರು ಗ್ರೇಡ್-1, ಸಹಾಯಕ ನಿರ್ದೇಶಕರ ಗ್ರೇಡ್-1 ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಮೈಸೂರು ಇವರ ಪತ್ರ ಸಂಖ್ಯೆ: ಸನಿಗ್ರೇಡ್-1:ಮೈ:ಶಿಕ್ಷಣ:ಸಿಆರ್: 2026-27, ದಿನಾಂಕ 20.06.2026 (ಪ್ರತಿ ಲಗತ್ತಿಸಿದೆ).

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, 2026-27ನೇ ಶೈಕ್ಷಣಿಕ ಸಾಲಿಗೆ ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಅಧ್ಯಯನ ವಿಭಾಗಗಳು/ಕೇಂದ್ರಗಳು/ಘಟಕ ಕಾಲೇಜುಗಳಲ್ಲಿ ಸ್ನಾತಕ/ಸ್ನಾತಕೋತ್ತರ ಕೋರ್ಸಿಗೆ ಪೋಷಕರ ವಾರ್ಷಿಕ ವರಮಾನ 2.50 ಲಕ್ಷದೊಳಗಿರುವ ಪ್ರವೇಶಾತಿ ಪಡೆಯುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಂದರ್ಭದಲ್ಲಿ ಪ್ರವೇಶ ಶುಲ್ಕ ಪಾವತಿಸುವಂತೆ ಒತ್ತಾಯಿಸದೇ ಉಲ್ಲೇಖಿತ (5)ರ ಪತ್ರದ ನಿರ್ದೇಶಾನುಸಾರ ಪ್ರವೇಶಾತಿ ಕ್ರಮವನ್ನು ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಲಾಗಿದೆ.

ಕುಲಸಚಿವರು 3/7/2026
ಕುಲಸಚಿವ
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

**ಇವರಿಗೆ;**

1. ಸಹಾಯಕ ನಿರ್ದೇಶಕರು ಗ್ರೇಡ್-1, ಸಹಾಯಕ ನಿರ್ದೇಶಕರ ಗ್ರೇಡ್-1 ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಡಾ.ಬಾಬು ಜಗಜೀವನರಾಂ ಭವನ, ಆದಿಪಂಪ ರಸ್ತೆ, ಒಂಟಿಕೊಪ್ಪಲು ಪೂರ್ವ ಬಡಾವಣೆ ಪಡುವಾರಹಳ್ಳಿ, ಮೈಸೂರು.
2. ಮೈಸೂರು ಜಿಲ್ಲೆಯ ವ್ಯಾಪ್ತಿಗೊಳಪಡುವ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ವಿಭಾಗಗಳು, ಮಾನಸಗಂಗೋತ್ರಿ, ಮೈಸೂರು.
5. ಕುಲಸಚಿವ (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಎಲ್ಲಾ ನಿಕಾಯದ ಡೀನರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ನಿರ್ದೇಶಕರು, ಯೋಜನೆ, ಉಸ್ತುವಾರಿ ಮತ್ತು ಮೌಲ್ಯಮಾಪನ ಮಂಡಳ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ನಿರ್ದೇಶಕರು, ಮೈಸೂರು ವಿಶ್ವವಿದ್ಯಾನಿಲಯ ತಾಂತ್ರಿಕ ಕಾಲೇಜು, ಮಾನಸಗಂಗೋತ್ರಿ, ಮೈಸೂರು.
10. ಆಡಳತಾಧಿಕಾರಿಗಳು, ಆಡಳತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು-ಆದೇಶದಲ್ಲಿ ತಿಳಿಸಿರುವಂತೆ ವಿದ್ಯಾರ್ಥಿಗಳು SSP Portal ಗೆ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಮತ್ತು ಸರಿಯಾಗಿ ಶುಲ್ಕಗಳನ್ನು SSP Portal ನಲ್ಲಿ upload ಮಾಡಲು ಕ್ರಮಕೈಗೊಳ್ಳುವುದು.
11. ಡಾ. ಜೆ ಲೋಹಿತ್, SSP ನೋಡಲ್ ಆಫೀಸರ್, ಅಂಕಿಅಂಶಗಳ ಘಟಕ, NCHS ಕಟ್ಟಡ, ಮಾನಸಗಂಗೋತ್ರಿ, ಮೈಸೂರು.
12. ವಿಶೇಷಾಧಿಕಾರಿಗಳು, ಕುಲಪತಿಗಳ ಕಛೇರಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಸಂಯೋಜಕರು, ಅಂಕಿಅಂಶಗಳ ಘಟಕ, NCHS ಕಟ್ಟಡ, ಮಾನಸಗಂಗೋತ್ರಿ, ಮೈಸೂರು.
14. ಸಂಯೋಜಕರು, ಐ.ಸಿ.ಡಿ., ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು- ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕಾಗಿ ಕೋರಿದೆ.
15. ಎಲ್ಲಾ ಉಪ ಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು, ಆಡಳತ ವಿಭಾಗ ಮತ್ತು ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
16. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
17. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

**ಸಹಾಯಕ ನಿರ್ದೇಶಕರು ಗ್ರೇಡ್-1 ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಮೈಸೂರು ತಾಲ್ಲೂಕು**

ಡಾ॥ ಬಾಬು ಜಗಜೀವನರಾಂ ಭವನ ಕಟ್ಟಡ, ಆದಿಪಂಪ ರಸ್ತೆ ಒಂಟಿಕೊಪ್ಪಲು ಪೂರ್ವ ಬಡಾವಣೆ ಪಡುವಾರಳ್ಳಿ ಮೈಸೂರು
ಮೈಸೂರು-10, ದೂರವಾಣಿ ಸಂಖ್ಯೆ-0821-2520910 Email-tswomy@gmail.com

---

ಸಂ:ಸನಿಗ್ರೇಡ್-1:ಮೈ:ಶಿಕ್ಷಣ:ಸಿಆರ್ :2026-27 ದಿನಾಂಕ: 20.06.2026

ಉಪ ಕುಲಸಚಿವರು/ರಿಜಿಸ್ಟ್ರಾರ್/
ಆಡಳಿತಾಧಿಕಾರಿಗಳು/ಪ್ರಾಂಶುಪಾಲರುಗಳು/
ನಿರ್ದೇಶಕರುಗಳು/ಡೀನ್/ಜಂಟಿ ನಿರ್ದೇಶಕರುಗಳು/
ಉಪನಿರ್ದೇಶಕರುಗಳು/ವಿದ್ಯಾಸಂಸ್ಥೆಯ ಮುಖ್ಯಸ್ಥರುಗಳು/
ಮೈಸೂರು ತಾಲ್ಲೂಕು ವ್ಯಾಪ್ತಿಗೆ ಸಂಬಂಧಪಟ್ಟ ಎಲ್ಲಾ
ಮೆಟ್ರಿಕ್ ನಂತರದ ವಿದ್ಯಾಸಂಸ್ಥೆಗಳು

ಕುಲಪತಿಗಳ ಕಛೇರಿ ಸಂ. 399 ದಿ. 29/06/26 ಮೈಸೂರು ವಿಶ್ವವಿದ್ಯಾನಿಲಯ

ಮಾನ್ಯರೆ,

ವಿಷಯ: ಮೈಸೂರು ತಾಲ್ಲೂಕಿನ ಎಲ್ಲಾ ಮೆಟ್ರಿಕ್ ನಂತರದ ವಿದ್ಯಾಸಂಸ್ಥೆಗಳಲ್ಲಿ 2026-27ನೇ ಸಾಲಿನಲ್ಲಿ ಪೋಷಕರ ವಾರ್ಷಿಕ ವರಮಾನ 2.50 ಲಕ್ಷದೊಳಗಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಪ್ರವೇಶಾತಿ ಸಂದರ್ಭದಲ್ಲಿ ಪ್ರವೇಶ ಶುಲ್ಕ ಪಾವತಿಸುವಂತೆ ಒತ್ತಾಯಿಸದಿರುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಸ.ಕ.ಇ. ಬೆಂಗಳೂರು ರವರ ಪತ್ರ ಸಂಖ್ಯೆ:ಸಕಇ/168 ಪಕವಿ 2020 ದಿನಾಂಕ 12.11.2020

2. ಮಾನ್ಯ ಸರ್ಕಾರದ ಉಪಕಾರ್ಯದರ್ಶಿಗಳು ಸ.ಕ.ಇ. ಬೆಂಗಳೂರು ರವರ ಸರ್ಕಾರದ ಆದೇಶ ಸಂಖ್ಯೆ:SWD/EDU/ED3/2023(com:1098854) ಬೆಂಗಳೂರು ದಿನಾಂಕ 03.07.2023

3. ಮಾನ್ಯ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರುರವರ ಪತ್ರ ಸಂಖ್ಯೆ SWD/EDU/ED3/116/939230/2022 ದಿನಾಂಕ 21.08.2024

4. ಈ ಕಛೇರಿ ಪತ್ರ ದಿನಾಂಕ 28/08/2024, ಇ-ಮೇಲ್ ದಿನಾಂಕ:30/08/2024

To Registrar 29/06

********

ವಿಷಯಕ್ಕೆ ಸಂಬಂಧಿಸಿದಂತೆ; ಉಲ್ಲೇಖ (1) (2) ಮತ್ತು (3)ರನ್ವಯ ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ/ಶಿಕ್ಷಣ ಸಂಸ್ಥೆಗಳಲ್ಲಿ/ಡೀಮ್ಡ್ ವಿಶ್ವವಿದ್ಯಾನಿಲಯ/ಖಾಸಗಿ ವಿಶ್ವವಿದ್ಯಾಲಯ/ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಕಾಲೇಜು ಶುಲ್ಕಗಳನ್ನು ಪಡೆಯದಂತೆ ಸಂಬಂಧಪಟ್ಟ ಶಿಕ್ಷಣ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನವನ್ನು ನೀಡುವುದು ಸೂಕ್ತವೆಂದು ಸರ್ಕಾರವು ಮನಗಂಡಿರುತ್ತದೆ.

ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರದಿಂದ ವಿದ್ಯಾರ್ಥಿವೇತನ ನೀಡಲಾಗುತ್ತಿದೆ. ಆದರೆ, ಕೆಲವು ತಾಂತ್ರಿಕ ಸಮಸ್ಯೆಗಳ ಕಾರಣಗಳಿಂದ ಕೆಲವು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವುದು ವಿಳಂಬವಾಗುತ್ತಿದೆ. ಈ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು ಶುಲ್ಕ ಪಾವತಿಸುವಂತೆ ಒತ್ತಾಯಿಸುತ್ತಿರುವುದು ವಿದ್ಯಾರ್ಥಿಗಳ ಭವಿಷ್ಯದ ಮೇಲೆ ದುಷ್ಪರಿಣಾಮವನ್ನುಂಟು ಮಾಡುತ್ತದೆ. ಅನೇಕ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಶುಲ್ಕ ಪಾವತಿಸಲು ಅಸಹಾಯಕರಾಗಿರುತ್ತಾರೆ. ಶಿಕ್ಷಣ ಸಂಸ್ಥೆಗಳ ಈ ಒಂದು ಒತ್ತಾಯದಿಂದ ಶುಲ್ಕ ಪಾವತಿಸಲು ಸಾಧ್ಯವಾಗದೆ ವಿದ್ಯಾರ್ಥಿಗಳು ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ. ಆದುದರಿಂದ, ರಾಜ್ಯದ ಯಾವುದೇ ವಿಶ್ವವಿದ್ಯಾಲಯಗಳಲ್ಲಿ/ಡೀಮ್ಡ್ ವಿಶ್ವವಿದ್ಯಾಲಯ/ಖಾಸಗಿ ವಿಶ್ವವಿದ್ಯಾಲಯ/ಸರ್ಕಾರಿ/ಅನುದಾನಿತ/ಅನುದಾನರಹಿತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಪ್ರವೇಶಾತಿ ಸಮಯದಲ್ಲಿ ಯಾವುದೇ ಕಡ್ಡಾಯವಾಗಿ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮರುಪಾವತಿ ಮಾಡಲಾಗುವ ಶುಲ್ಕಗಳನ್ನು ಪಾವತಿಸುವಂತೆ ಒತ್ತಾಯ ಮಾಡದಂತೆ ಕಾಲೇಜುಗಳಿಗೆ ಮನವರಿಕೆ ಮಾಡಿಕೊಡುವುದು. ಹಾಗೂ ಸದರಿ ಕಾಲೇಜಿನ ಶುಲ್ಕದ ಮೊತ್ತವನ್ನು ವಿದ್ಯಾರ್ಥಿಗೆ ವಿದ್ಯಾರ್ಥಿವೇತನ ಮಂಜೂರಾದ

AC-2(S)

ನಂತರದಲ್ಲಿ ಪಾವತಿ ಮಾಡಿಸಿಕೊಳ್ಳುವಂತೆ ಸೂಚಿಸುವುದು ಎಂದು ನಿರ್ದೇಶನ ನೀಡಲಾಗಿರುತ್ತದೆ. ಉಲ್ಲೇಖ (4) ರ ಈ ಕಛೇರಿ ಪತ್ರದಲ್ಲಿ ಈಗಾಗಲೇ ವರ್ಷವಾರು ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಪ್ರವೇಶಾತಿ ಸಮಯದಲ್ಲಿ ವಿದ್ಯಾರ್ಥಿವೇತನದಿಂದ ಮರುಪಾವತಿ ಮಾಡಲಾಗುವ ಕಡ್ಡಾಯ ಶುಲ್ಕಗಳನ್ನು ವಸೂಲಾತಿ ಮಾಡಬಾರದೆಂದು ಸೂಚಿಸಿ ಮೈಸೂರು ತಾಲ್ಲೂಕಿನ ಎಲ್ಲಾ ಮೆಟ್ರಿಕ್ ನಂತರದ ವಿದ್ಯಾಸಂಸ್ಥೆಗಳಿಗೆ ಪತ್ರ ಮುಖೇನ ಇ-ಮೇಲ್ ಮೂಲಕ ಸೂಚಿಸಲಾಗಿರುತ್ತದೆ. ಆದ್ದರಿಂದ 2026-27 ನೇ ಸಾಲಿನಲ್ಲೂ ಕೂಡ ಮತ್ತೊಮ್ಮೆ ಈ ವಿಷಯವನ್ನು ತಮಗೆ ಮಾಹಿತಿಗಾಗಿ ಸಲ್ಲಿಸುತ್ತಾ ದಾಖಲಾತಿ ಸಂದರ್ಭದಲ್ಲಿ ಪೋಷಕರ ವಾರ್ಷಿಕ ವರಮಾನ 2.50 ಲಕ್ಷದೊಳಗಿರುವ ಯಾವುದೇ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಶುಲ್ಕ ಪಾವತಿಸುವಂತೆ ಒತ್ತಾಯಿಸದೆ ಪ್ರವೇಶಾತಿ ನೀಡಲು ಸೂಚಿಸಿದೆ. ಈ ಬಗ್ಗೆ ಕ್ರಮವಹಿಸದೇ ಅನಧಿಕೃತವಾಗಿ ಶುಲ್ಕ ವಸೂಲಾತಿ ಮಾಡಿದಲ್ಲಿ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ಪ್ರತಿಬಂಧ) ತಿದ್ದುಪಡಿ ಅಧಿನಿಯಮ, 2015 ಮತ್ತು ತಿದ್ದುಪಡಿ ನಿಯಮಗಳು, 2016. ರನ್ವಯ ಶಿಕ್ಷಾರ್ಹ ಅಪರಾಧವೆಂದು ಪರಿಗಣಿಸಿ, ಪ್ರಕರಣ ದಾಖಲು ಮಾಡಲಾಗುವುದು. ಆದ್ದರಿಂದ ಈ ಬಗ್ಗೆ ತಾಲ್ಲೂಕಿನ ಎಲ್ಲಾ ಮೆಟ್ರಿಕ್ ನಂತರದ ವಿದ್ಯಾಸಂಸ್ಥೆಗಳ/ವಿಶ್ವವಿದ್ಯಾನಿಲಯಗಳ ಮುಖ್ಯಸ್ಥರುಗಳು ಅಗತ್ಯ ಕ್ರಮವಹಿಸಬೇಕಾಗಿ ಈ ಮೂಲಕ ತಮ್ಮನ್ನು ಕೋರಿದೆ.

ತಮ್ಮ ನಂಬುಗೆಯ

ಸಹಿ/-

ಸಹಾಯಕ ನಿರ್ದೇಶಕರು ಗ್ರೇಡ್-1
ಸಮಾಜ ಕಲ್ಯಾಣ ಇಲಾಖೆ
ಮೈಸೂರು ತಾಲ್ಲೂಕು, ಮೈಸೂರು

ಪ್ರತಿಯನ್ನು:-

1. ಉಪ ನಿರ್ದೇಶಕರು (ಶಿಕ್ಷಣ) ಹಾಗೂ ನೋಡಲ್ ಆಫೀಸರ್, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಕಛೇರಿ ಪ್ರತಿ.

ಸಹಾಯಕ ನಿರ್ದೇಶಕರು ಗ್ರೇಡ್-1
ಸಮಾಜ ಕಲ್ಯಾಣ ಇಲಾಖೆ
ಮೈಸೂರು ತಾಲ್ಲೂಕು, ಮೈಸೂರು